For more job news visit : www.kpscvaani.com

ಕರ್ನಾಟಕ ಸರ್ಕಾರ

ವಿಶೇಷ ನೇಮಕಾತಿ ಸಮಿತಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು–560 009.

ಅಧಿಸೂಚನೆ ಸಂಖ್ಯೆ: ಎಸ್ಆರ್‌ಸಿ/68/2019–20, ದಿನಾಂಕ: 10.09.2020

ಅಧಿಸೂಚನೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಹಿರಿಯ ವೈದ್ಯಾಧಿಕಾರಿ/ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಮತ್ತು ದಂತ ವೈದ್ಯಾಧಿಕಾರಿಗಳ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳಿಗೆ ನೇಮಕಾತಿ ಬಗ್ಗೆ

ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಎಫ್‌ಡಬ್ಲ್ಯೂ/71/ಹೆಚ್‌ಎಸ್‌ಹೆಚ್/2019, ದಿನಾಂಕ 16.06.2020 ಮತ್ತು ದಿನಾಂಕ:25.08.2020ರಲ್ಲಿ ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ (ಹಿರಿಯ ವೈದ್ಯಾಧಿಕಾರಿ/ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಮತ್ತು ದಂತ ವೈದ್ಯಾಧಿಕಾರಿಗಳ ನೇಮಕಾತಿ) (ವಿಶೇಷ) ನಿಯಮಗಳು 2020ರ ನಿಯಮಗಳಡಿಯಲ್ಲಿ ಉಳಿಕೆ ಮೂಲ ವೃಂದದ ಮತ್ತು ಹೈದರಾಬಾದ್–ಕರ್ನಾಟಕ ವೃಂದದ ಹುದ್ದೆಗಳನ್ನು ಹಾಗೂ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ ಇಲಾಖೆಯ ವೆಬ್‌ಸೈಟ್ https://karunadu.karnataka.gov.in/hfw/ನಲ್ಲಿ ಆನ್–ಲೈನ್ ಮೂಲಕ ಈ ಕೆಳಕಂಡ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಿದೆ.

ಕ್ರ.ಸಂ	ಹುದ್ದೆಯ ಪದನಾಮ ಮತ್ತು ವೇತನ ಶ್ರೇಣಿ	ಬ್ಯಾಕ್‌ಲಾಗ್ ಹುದ್ದೆಗಳು	ಉಳಿಕೆ ಮೂಲ ವೃಂದದ ಹುದ್ದೆಗಳು	ಹೈ–ಕ ವೃಂದದ ಹುದ್ದೆಗಳು	ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ
1	2	3	4	5	6
1.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಜನರಲ್ ಮೆಡಿಸಿನ್) **Senior Medical Officer/Specialist in General Medicine.** (M.D.General Medicine) (Rs.56800-99600)	**171**	**70**	-	**Must possess MBBS with Post Graduation Degree in General Medicine from a University established by law in India.**
2.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಜನರಲ್ ಸರ್ಜರಿ) **Senior Medical Officer/Specialist in General Surgery** (M.S.General Surgery) (Rs.56800-99600)	**58**	**31**	-	**Must possess MBBS with Post Graduation Degree in General Surgery from a University established by law in India.**
3.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಪ್ರಸೂತಿ & ಸ್ತ್ರೀರೋಗ) **Senior Medical Officer/Specialist in Obstetrics and Gynaecology** (M.S.Obstetrics and Gynoecology/DGO) (Rs.56800-99600)	**109**	**170**	-	**Must possess MBBS with Post Graduation Degree or Diploma in Obstetrics and Gynaecology from a University established by law in India.**
4.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಕಿವಿ, ಮೂಗು,ಗಂಟಲು) **Senior Medical Officer/Specialist in ENT** (M.S.ENT/DLO) (Rs.56800-99600)	**23**	**26**	-	**Must possess MBBS with Post Graduation Degree or Diploma in Laryngological and Otology from a University established by law in India.**
5.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಚರ್ಮರೋಗ) **Senior Medical Officer/Specialist in Dermatology and Venereal Diseases (Skin)** (M.D.Skin and VD)/DVD (Rs.56800-99600)	**60**	**48**	-	**Must possess MBBS with Post Graduation Degree or Diploma in Skin, Dermatology and Venereal Diseases from a University established by law in India.**

For more job news visit : www.kpscvaani.com

6.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಅರವಳಿಕೆ) **Senior Medical Officer/Specialist in Anaesthesia** (M.D.Anaesthesia/D.A) (Rs.56800-99600)	35	195	-	Must possess MBBS with Post Graduation Degree or Diploma in Anaesthesia from a University established by law in India.
7.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಮಕ್ಕಳ ತಜ್ಞರು) **Senior Medical Officer/Specialist in Paediatrician** (M.D.Paediatrician/DCH) (Rs.56800-99600)	105	191	-	Must possess MBBS with Post Graduation Degree or Diploma in Child Health from a University established by law in India.
8.	ಹಿರಿಯ ವೈದ್ಯಾಧಿಕಾರಿ/ತಜ್ಞರು (ನೇತ್ರ) **Senior Medical Officer/Specialist in Ophthalmology.** (M.S.Opthal./D.O.M.S) (Rs. 56800-99600)	44	38	-	Must possess MBBS with post Graduation Degree or Diploma in Ophthalmology from a University established by law in India.
9.	ಹಿರಿಯ ವೈದ್ಯಾಧಿಕಾರಿ/ತಜ್ಞರು (ಕೀಲು, ಮೂಳೆ ರೋಗ) **Senior Medical Officer/Specialist in Orthopaedics** (M.S.Ortho/D.Ortho) (Rs.56800-99600)	03	28	-	Must possess MBBS with Post Graduation Degree or Diploma in Orthopaedics from a University established by law in India.
10.	ಹಿರಿಯ ವೈದ್ಯಾಧಿಕಾರಿ/ತಜ್ಞರು (ರೇಡಿಯಾಲಜಿ) **Senior Medical Officer/Specialist in Radiology** (M.D.R.D/D.M.R.D) (Rs.56800-99600)	28	27	-	Must possess MBBS with Post Graduation Degree or Diploma in Medical Radio Diagnosis from a University established by law in India.
11.	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು **General Duty Medical Officers** (Rs.52650-97100)	ಉ.ಮೂ ವೃಂದ–10 ಹೈ–ಕ–09	1095	151	Must possess MBBS Degree from a University established by law in India. The General Duty Medical Officer recruited under these rules shall work in the rural areas for minimum period of six years.
12.	ದಂತ ಆರೋಗ್ಯಾಧಿಕಾರಿಗಳು **Dental Health Officer** (Rs. 52650-97100)	ಹೈ–ಕ–02	63	25	Must possess BDS Degree from a University established by law in India. The Dental Health Officer recruited under these rules shall work in the rural areas for minimum period of six years.

ಸೂಚನೆ:–

1. ಮೇಲ್ಕಂಡ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಭಾರತೀಯ/ಕರ್ನಾಟಕ ವೈದ್ಯಕೀಯ ಪರಿಷತ್ ನಲ್ಲಿ ನೋಂದಣಿ ಮಾಡಿಸಿರುವ ಪ್ರಮಾಣ ಪತ್ರ ಹೊಂದಿರಬೇಕು.
2. ದಂತ ಆರೋಗ್ಯಾಧಿಕಾರಿಗಳ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಭಾರತೀಯ/ಕರ್ನಾಟಕ ದಂತ ಪರಿಷತ್ ನಲ್ಲಿ ನೋಂದಣಿ ಮಾಡಿಸಿರುವ ಪ್ರಮಾಣ ಪತ್ರ ಹೊಂದಿರಬೇಕು.
3. ಮೇಲ್ಕಂಡ ಹುದ್ದೆಗಳ ವರ್ಗೀಕರಣದ ವಿವರಗಳನ್ನು ಸೂಚಿಸಲಾಗಿದೆ ಮತ್ತು ಪ್ರಕಟಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ಮತ್ತು ಹಾಗೂ ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ ಹಾಗೂ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇನ್ನಿತರೆ ವಿದ್ಯಾರ್ಹತೆಯನ್ನು ಅಯ್ಕೆಗೆ ಪರಿಗಣಿಸಲಾಗುವುದಿಲ್ಲ.
4. ಸರ್ಕಾರದ ಆದೇಶಗಳಂತೆ ಈ ಹಿಂದೆ ನೇಮಕಾತಿಯಲ್ಲಿ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಆಯಾ ಪ್ರವರ್ಗಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳೆಂದು ಪರಿಗಣಿಸಿ ಅಧಿಸೂಚಿಸಲಾಗಿದೆ.

For more job news visit : www.kpscvaani.com

ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭ ದಿನಾಂಕ :: 16-09-2020
ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ :: 15-10-2020
ಶುಲ್ಕ ಪಾವತಿಸಲು ಕೊನೆಯ ದಿನಾಂಕ :: 16-10-2020

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳುವುದು:-

ಸಾ.ಅ	ಸಾಮಾನ್ಯ ಅರ್ಹತೆ	GM	General Merit
ಪ.ಜಾ	ಪರಿಶಿಷ್ಟ ಜಾತಿ	SC	Scheduled Caste
ಪ.ಪಂ	ಪರಿಶಿಷ್ಟ ಪಂಗಡ	ST	Scheduled Tribe
ಪ್ರ-1	ಪ್ರವರ್ಗ-1	Cat-1	Category-I
ಪ್ರ-2ಎ	ಪ್ರವರ್ಗ-2ಎ	2A	Category-2A
ಪ್ರ-2ಬಿ	ಪ್ರವರ್ಗ-2ಬಿ	2B	Category-2B
ಪ್ರ-3ಎ	ಪ್ರವರ್ಗ-3ಎ	3A	Category-3A
ಪ್ರ-3ಬಿ	ಪ್ರವರ್ಗ-3ಬಿ	3B	Category-3B
ಮಾ.ಸೈ	ಮಾಜಿ ಸೈನಿಕ	Ex-MP	Ex-Military Person
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Candidate
ಅಂ.ವಿ	ಎದ್ದು ಕಾಣುವ ಅಂಗವಿಕಲತೆಯುಳ್ಳ ಅಭ್ಯರ್ಥಿ	PH OA OL BL HI	Person with bench mark disability One Arm One Leg Both Leg Hearing Impairment
ಉ.ಮೂ.ವೃ	ಉಳಿಕೆ ಮೂಲ ವೃಂದ	RPC	Residual Parent Cadre
ಹೈ.ಕ	ಹೈದರಾಬಾದ್-ಕರ್ನಾಟಕ	HK	Hyderabad-Karnataka

ಆನ್-ಲೈನ್ ಮೂಲಕ ಅರ್ಜಿಯನ್ನು ಭರ್ತಿಮಾಡುವ ಮುನ್ನ ಅಭ್ಯರ್ಥಿಗಳು ಈ ಕೆಳಕಂಡ ಸೂಚನೆಗಳನ್ನು ಓದಿಕೊಳ್ಳಲು ಸೂಚಿಸಿದೆ

- ಅಭ್ಯರ್ಥಿಗಳು ಆನ್-ಲೈನ್ ಅರ್ಜಿ ಸಲ್ಲಿಸುವ ಮೊದಲು ಸಂಬಂಧಪಟ್ಟ ಅಧಿಸೂಚನೆ/ಅಭ್ಯರ್ಥಿಗಳಿಗೆ ನೀಡಿರುವ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು.
- ಆನ್-ಲೈನ್ ಅರ್ಜಿ ಸಲ್ಲಿಸುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಕಲರ್ ಭಾವಚಿತ್ರವನ್ನು ಒಂದು ಬಿಳಿ ಹಾಳೆಯ ಮೇಲೆ ಅಂಟಿಸಿ ಅದರ ಕೆಳಗೆ ಕಪ್ಪು ಶಾಹಿಯ ಪೆನ್ ನಲ್ಲಿ ಸಹಿಮಾಡಿ ಅದನ್ನು SCAN ಮಾಡಿ JPG FORMAT ನಲ್ಲಿ SAVE ಮಾಡಿಕೊಳ್ಳುವುದು SAVE ಆಗಿರುವ ಸಹಿ ಸಮೇತ ಭಾವಚಿತ್ರದ ಗಾತ್ರ (SIZE) 100 KB ಮೀರಿರಬಾರದು.
- ಆನ್-ಲೈನ್ ಅರ್ಜಿ ಸಲ್ಲಿಸುವಾಗ ಕಂಪ್ಯೂಟರ್ ಪರದೆಯ ಮೇಲೆ ಮೂಡುವ ಆನ್-ಲೈನ್ ಅರ್ಜಿಯ ನಮೂನೆಯಲ್ಲಿ ವಿವರಗಳನ್ನು ಭರ್ತಿಮಾಡುವುದು ಹಾಗೂ SCAN ಮಾಡಿಟ್ಟುಕೊಂಡಿರುವ ಸಹಿ ಸಮೇತದ ಭಾವಚಿತ್ರವನ್ನು Upload ಮಾಡುವುದು.
- ಕಡ್ಡಾಯವಾಗಿ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಹುದ್ದೆಗಳ ಅನುಗುಣವಾಗಿ ಅಗತ್ಯವಿರುವ ವಿದ್ಯಾರ್ಹತೆಗಳಿಗೆ ಹಾಗೂ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.
- ಅರ್ಜಿಯ ವಿವರಗಳನ್ನು ನಮೂದಿಸಿದ ನಂತರ ಮತ್ತೊಮ್ಮೆ ಪರೀಕ್ಷಿಸಲು Preview ನ್ನು ಕ್ಲಿಕ್ ಮಾಡಬೇಕು. ನಮೂದಿಸಿರುವ ವಿವರಗಳನ್ನು ಬದಲಾಯಿಸಲು Edit ನ್ನು ಕ್ಲಿಕ್ ಮಾಡಬೇಕು, Preview ಮಾಡದೇ ಅರ್ಜಿಯನ್ನು ಸಲ್ಲಿಸಲು ಸಾಧ್ಯವಿಲ್ಲ.
- ಅರ್ಜಿಯನ್ನು ಸಲ್ಲಿಸಿದ ನಂತರ ಕಂಪ್ಯೂಟರ್ Application ID ಸಂಖ್ಯೆ ಪರದೆಯ ಮೇಲೆ ಮೂಡುತ್ತದೆ. ಅಭ್ಯರ್ಥಿಗಳು ಈ ವಿವರಗಳನ್ನು ಮುಂದಿನ ಉಪಯೋಗಕ್ಕಾಗಿ ಭದ್ರವಾಗಿ ಬರೆದಿಟ್ಟುಕೊಳ್ಳತಕ್ಕದ್ದು.
- ಅರ್ಜಿ ಶುಲ್ಕವನ್ನು ಭರ್ತಿಮಾಡಲು ಬೇಕಾದ ಅಂಚೆ ಕಛೇರಿಯ ಚಲನ್‌ನನ್ನು ಮುದ್ರಿಸಲು Print Challan ಅನ್ನು ಕ್ಲಿಕ್ ಮಾಡಬೇಕು, ನಂತರ ಚಲನ್‌ನನ್ನು ಮುದ್ರಿಸಿಕೊಳ್ಳತಕ್ಕದ್ದು.
- ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯಲ್ಲಿ ಪಾವತಿಸಿದ 48 ಗಂಟೆಗಳ ನಂತರ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಭರ್ತಿ ಮಾಡಿರುವ ಅರ್ಜಿಯನ್ನು ಮುದ್ರಿಸಿಕೊಳ್ಳುವುದು.

For more job news visit : www.kpscvaani.com

- ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿ ಭರ್ತಿ ಮಾಡಲು ಅನ್–ಲೈನ್ ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿಮಾಡತಕ್ಕದ್ದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ದ ಇಲಾಖಾ ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಅರ್ಜಿ ಶುಲ್ಕ:–

ಸಾಮಾನ್ಯ ಅರ್ಹತಾ ಅಭ್ಯರ್ಥಿಗಳಿಗೆ	ರೂ. 1000/–
ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ	ರೂ. 500/–
ಮಾಜಿ ಸೈನಿಕ ಅಭ್ಯರ್ಥಿಗಳಿಗೆ	ರೂ. 100/–
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ	ಶುಲ್ಕ ವಿನಾಯಿತಿ ಇದೆ.

ಸೂಚನೆ:– ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

- ಅರ್ಜಿಗಳನ್ನು https://karunadu.karnataka.gov.in/hfw/ ರಲ್ಲಿ ಆನ್–ಲೈನ್ ಮೂಲಕವೇ ಭರ್ತಿಮಾಡಿ, ಭಾವಚಿತ್ರ/ಸಹಿ ಮಾಡಿದ ನಂತರ ಅರ್ಜಿ ಶುಲ್ಕವನ್ನು ಪಾವತಿಸಲು ಚಲನ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಕರ್ನಾಟಕದ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ ಕೆಲಸದ ವೇಳೆಯೊಳಗೆ (**e-Payment Post Offices Only**) ಮೂಲಕ ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಸೇವಾಶುಲ್ಕದೊಂದಿಗೆ ಸಂದಾಯ ಮಾಡಬಹುದಾಗಿರುತ್ತದೆ.
- ಶುಲ್ಕವನ್ನು ಪಾವತಿಸದೇ ಭಾವಚಿತ್ರ/ಸಹಿಯನ್ನು ಅಪ್ಲೋಡ್ ಮಾಡದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಡಿಡಿ, ಪೋಸ್ಟಲ್ ಆರ್ಡರ್‌ಗಳು ಮತ್ತು ಮನಿ ಆರ್ಡರ್‌ಗಳನ್ನು ಸ್ವೀಕರಿಸಲಾಗುವುದಿಲ್ಲ. ಅಂಚೆ ಕಛೇರಿಯಲ್ಲಿ ಪಾವತಿಸಿದ ಮೂಲ ಚಲನ್ ಪ್ರತಿಯನ್ನು ದಾಖಲಾತಿ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇಲಾಖೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು ಆನ್–ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಧಾರ್ ಕಾರ್ಡ್ ಸಂಖ್ಯೆ, ಚಾಲ್ತಿಯಲ್ಲಿರುವ ಇ–ಮೇಲ್ ವಿಳಾಸ/ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಲು ಸೂಚಿಸಿದೆ. ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಇದೇ ಇ–ಮೇಲ್ ವಿಳಾಸ/ಮೊಬೈಲ್ ಸಂಖ್ಯೆಯನ್ನೇ ವಿಶೇಷ ನೇಮಕಾತಿ ಸಮಿತಿಯ ವ್ಯವಹಾರಗಳಿಗೆ ಪರಿಗಣಿಸಲಾಗುವುದರಿಂದ, ಇದನ್ನು ಸುಭದ್ರವಾಗಿಟ್ಟುಕೊಳ್ಳಬೇಕೆಂದು ಮತ್ತು ಬದಲಾಯಿಸಲು ಅವಕಾಶ ನೀಡಲಾಗುವುದಿಲ್ಲ.
- ಅರ್ಜಿ ಸಲ್ಲಿಸುವ ಕೊನೆಯ ದಿನಗಳಲ್ಲಿ ಹೆಚ್ಚು ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂಭವವಿರುವುದರಿಂದ ಸರ್ವರ್ ಜಾಮ್ ಆಗುವ ಸಾಧ್ಯತೆಗಳಿರುವ ಕಾರಣ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಆನ್–ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
- ವಿಶೇಷ ನೇಮಕಾತಿ ಸಮಿತಿಯು ಈ ನೇಮಕಾತಿಗೆ ಸಂಬಂಧಿಸಿದ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದರಿಂದ, ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ಅಂತರ್ಜಾಲವನ್ನು ವೀಕ್ಷಿಸಲು ಈ ಮೂಲಕ ಸೂಚಿಸಿದೆ.

For more job news visit : www.kpscvaani.com

- ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿ ಭರ್ತಿ ಮಾಡಲು ಆನ್–ಲೈನ್‌ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು. ಒಂದು ವೇಳೆ ತಪ್ಪು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿಯ ಯಾವ ಹಂತದಲ್ಲಿಯಾದರೂ ಸೂಕ್ತ ಕ್ರಮಕ್ಕೆಗೊಳ್ಳಲಾಗುವುದು ಹಾಗೂ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಆನ್–ಲೈನ್ ಅರ್ಜಿ ಸಲ್ಲಿಸುವಾಗ ಹೆಲ್ಪ್ ಲೈನ್ ಸಂಖ್ಯೆ: 080–22873151, 080–22340197ಗಳಿಗೆ ಕಛೇರಿ ಕೆಲಸದ ವೇಳೆಯಲ್ಲಿ ಮಾತ್ರ ಕಡ್ಡಾಯವಾಗಿ (ಬೆಳಗ್ಗೆ 10–00 ರಿಂದ ಸಂಜೆ 5–30) ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿರುತ್ತದೆ.

ಅರ್ಜಿ ಶುಲ್ಕವನ್ನು ಪಾವತಿಸುವ ಕುರಿತು ಅಂಚೆ ಕಛೇರಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಳು ಅವಶ್ಯಕತೆ ಇದ್ದಲ್ಲಿ 080–22392668, ದೂರವಾಣಿ ಸಂಖ್ಯೆಗೆ ಅಂಚೆ ಕಛೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ವಯೋಮಿತಿ:– ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಈ ಕೆಳಕಂಡ ವಯೋಮಿತಿಯನ್ನು ಹೊಂದಿರಬೇಕು. (ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯೂ/71/ಹೆಚ್‌ಎಸ್‌ಹೆಚ್/2019, ದಿನಾಂಕ:25.08.2020ರನ್ವಯ ಕನಿಷ್ಠ ವಯೋಮಿತಿಯನ್ನು ಮತ್ತು ಸೇವಾ ಕೃಪಾಂಕವನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ)

ವರ್ಗ	ಕನಿಷ್ಠ	ಗರಿಷ್ಠ
ಸಾಮಾನ್ಯ ವರ್ಗ	26 ವರ್ಷಗಳು	42 ವರ್ಷಗಳು
2ಎ, 2ಬಿ, 3ಎ, 3ಬಿ	26 ವರ್ಷಗಳು	45 ವರ್ಷಗಳು
ಪ.ಜಾ, ಪ.ಪಂ, ಪ್ರವರ್ಗ–1	26 ವರ್ಷಗಳು	47 ವರ್ಷಗಳು

ಸೇವಾ ಕೃಪಾಂಕ ಮತ್ತು ವಯೋಮಿತಿ ಸಡಿಲಿಕೆ:– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಥವಾ ವೈದ್ಯಕೀಯ ಶಿಕ್ಷಣ ಇಲಾಖೆ ಅಥವಾ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಅಥವಾ ಕರ್ನಾಟಕದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಯೋಜನೆಗಳಡಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಹಿರಿಯ ವೈದ್ಯಾಧಿಕಾರಿ ಅಥವಾ ತಜ್ಞರು ಅಥವಾ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಅಥವಾ ದಂತ ವೈದ್ಯಾಧಿಕಾರಿಗಳಾಗಿ ಖಾಯಂ ಅಥವಾ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ವೈದ್ಯರುಗಳಿಗೆ ವಿಶೇಷ ನೇಮಕಾತಿ ನಿಯಮಗಳ ತಿದ್ದುಪಡಿ ಅಧಿಸೂಚನೆ ದಿನಾಂಕ:25.08.2020ರನ್ವಯ ಪ್ರತಿ ಆರು ತಿಂಗಳ ಪೂರ್ಣ ಗುತ್ತಿಗೆ ಸೇವಾವಧಿ ಪೂರೈಸಿರುವವರಿಗೆ 2.5% ರಷ್ಟು, ಗರಿಷ್ಠ 30% ಕೃಪಾಂಕವನ್ನು ಕಲ್ಪಿಸಲಾಗುವುದು ಹಾಗೂ ಒಂದು ವರ್ಷ ಪೂರ್ಣ ಗುತ್ತಿಗೆ ಸೇವಾವಧಿಯನ್ನು ಪೂರೈಸಿರುವವರಿಗೆ ಒಂದು ವರ್ಷ ವಯೋಮಿತಿ ಸಡಿಲಿಕೆಯನ್ನು ಕಲ್ಪಿಸಲಾಗಿದ್ದು, ಗರಿಷ್ಠ 10 ವರ್ಷ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದು. ಈ ವಯೋಮಿತಿ ಸಡಿಲಿಕೆಯನ್ನು ನೀಡಿದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಗರಿಷ್ಠ ವಯೋಮಿತಿ 50 ವರ್ಷಗಳನ್ನು ಮೀರಿರಬಾರದು.

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರ ಅನುಸಾರ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

(ಅ)	ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ	ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು

For more job news visit : www.kpscvaani.com

(ಆ)	ಮಾಜಿ ಸೈನಿಕನಾಗಿದ್ದಲ್ಲಿ	ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು
(ಇ)	ನ್ಯಾಷನಲ್ ಕ್ಯಾಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ	ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು
(ಈ)	ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ	ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು
(ಉ)	ಅಂಗವಿಕಲ ಅಭ್ಯರ್ಥಿಗಳಿಗೆ	10 ವರ್ಷಗಳು
(ಊ)	ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ	ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು
(ಋ)	ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಸಮಿತಿಯು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು)	10 ವರ್ಷಗಳು
(ಎ)	ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1975ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡು ನೇಮಕಾತಿ ಸಮಿತಿಯು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಸಬೇಕು.	10 ವರ್ಷಗಳು

ಅರ್ಹತಾ ಷರತ್ತುಗಳು:-

ಅ) ಭಾರತೀಯ ನಾಗರೀಕನಾಗಿರತಕ್ಕದ್ದು ಮತ್ತು ಆಧಾರ್ ಸಂಖ್ಯೆಯನ್ನು ಹೊಂದಿರಬೇಕು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನೇಮಕಾತಿ ವಿಧಾನ :- ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ (ಹಿರಿಯ ವೈದ್ಯಾಧಿಕಾರಿ/ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಮತ್ತು ದಂತ ವೈದ್ಯಾಧಿಕಾರಿಗಳ ನೇಮಕಾತಿ) (ವಿಶೇಷ) ನಿಯಮಗಳು 2020 ದಿನಾಂಕ 16.06.2020 ಮತ್ತು ದಿನಾಂಕ:25.08.2020 ರನ್ವಯ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿದ ಒಟ್ಟು ಶೇಕಡವಾರು ಅಂಕಗಳು, ಸೇವಾ ಕೃಪಾಂಕ ಮತ್ತು ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಪ್ರಕಟಿಸಲಾದ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಆಯ್ಕೆಮಾಡಲಾಗುವುದು.

For more job news visit : www.kpscvaani.com

ಆಯ್ಕೆಯಾಗಿರುವ ಪ್ರತಿಯೊಬ್ಬ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರು ತಿಂಗಳ ಒಳಗೆ ರಾಜೀನಾಮೆ ನೀಡಿದಲ್ಲಿ ಅಥವಾ ಮೂವತ್ತು ದಿನಗಳಿಗೂ ಮೀರಿ ಅನಧಿಕೃತ ಗೈರು ಹಾಜರಾದಲ್ಲಿ ಈ ಕೆಳಕಂಡ ಮೊತ್ತವನ್ನು ದಂಡವಾಗಿ ಪಾವತಿಸುತ್ತೇನೆಂದು ಜ್ಯುಡಿಷಿಯಲ್ ಬಾಂಡ್ **(irrevocable undertaking on Judicial bond paper)** ನಲ್ಲಿ ಸಹಿ ಮಾಡಿ ಪ್ರಮಾಣ ಪತ್ರವನ್ನು ಸಲ್ಲಿಸಿದ ನಂತರವೇ ನೇಮಕಾತಿ ಆದೇಶ ನೀಡಲಾಗುವುದು.

ಕ್ರಮ ಸಂಖ್ಯೆ	ಹುದ್ದೆಯ ಹೆಸರು	ಬಾಂಡ್ ಮೊತ್ತ (ರೂ.)
01	ಹಿರಿಯ ವೈದ್ಯಾಧಿಕಾರಿ/ತಜ್ಞರು	10 ಲಕ್ಷಗಳು
02	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ	05 ಲಕ್ಷಗಳು
03	ದಂತ ಆರೋಗ್ಯಾಧಿಕಾರಿ	03 ಲಕ್ಷಗಳು

ಕನ್ನಡ ಭಾಷಾ ಜ್ಞಾನ:– ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವೆಗಳು (ಸೇವೆ ಮತ್ತು ಕನ್ನಡ ಭಾಷಾ ಪರೀಕ್ಷೆ) ನಿಯಮಗಳು 1974 ಅನ್ವಯ **ನೇಮಕಾತಿಯಾದ ದಿನಾಂಕದಿಂದ ಎರಡು ವರ್ಷದ ಅವಧಿಯೊಳಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.**

ಎಸ್.ಎಸ್.ಎಲ್.ಸಿ ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ ಪರೀಕ್ಷೆಗಿಂತ ಮೇಲ್ಪಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ, ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು ಅಥವಾ ತೃತೀಯ ಭಾಷೆಯಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ.

ಸರ್ಕಾರದ ಪತ್ರ ಸಂಖ್ಯೆ ಸಿಆಸುಇ 39 ಸೇವನೆ 2018 ದಿನಾಂಕ 17.04.2018ರ ಸ್ಪಷ್ಟೀಕರಣದನ್ವಯ ಅಭ್ಯರ್ಥಿಗಳು ಒಂದು ಬಾರಿ ಲೋಕಸೇವಾ ಆಯೋಗವು ನಡೆಸುವ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ (ಸದರಿ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯ ಪಠ್ಯಕ್ರಮದ ಮಾದರಿಯಲ್ಲಿಯೇ) ಉತ್ತೀರ್ಣರಾಗಿದ್ದಲ್ಲಿ ಮತ್ತೊಮ್ಮೆ ಇತರೆ ಹುದ್ದೆಗಳಿಗಾಗಿ ಆಯೋಗವು ನಡೆಸುವ ಕಡ್ಡಾಯ ಕನ್ನಡ ಪರೀಕ್ಷೆಯನ್ನು ತೆಗೆದುಕೊಳ್ಳುವುದರಿಂದ ವಿನಾಯಿತಿ ನೀಡಲಾಗಿದೆ.

ಜಾತಿ ಮತ್ತು ಮೀಸಲಾತಿ ಪ್ರಮಾಣ ಪತ್ರಗಳ ನಮೂನೆ:–

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು	ನಮೂನೆ 'ಡಿ' ಸದರಿ ಪ್ರಮಾಣ ಪತ್ರಗಳು ಜೀವಿತಾವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಪಡೆದಿರತಕ್ಕದ್ದು. **ಕೊನೆಯ ದಿನಾಂಕದ ನಂತರ ಪಡೆದ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.**
ಪ್ರವರ್ಗ–1 ಕ್ಕೆ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು	ನಮೂನೆ 'ಇ' ಸದರಿ ಪ್ರಮಾಣ ಪತ್ರಗಳು ಜೀವಿತಾವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಪಡೆದಿರತಕ್ಕದ್ದು. **ಕೊನೆಯ ದಿನಾಂಕದ ನಂತರ ಪಡೆದ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.**
ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು	ನಮೂನೆ 'ಎಫ್' ಹಿಂದುಳಿದ ವರ್ಗಗಳ ಪ್ರವರ್ಗ–2(ಎ), ಪ್ರವರ್ಗ–2(ಬಿ), ಪ್ರವರ್ಗ–3(ಎ) ಮತ್ತು ಪ್ರವರ್ಗ–3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ.

For more job news visit : www.kpscvaani.com

	ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು. ಕೊನೆಯ ದಿನಾಂಕದ ನಂತರ ಪಡೆದ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು	• ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13.02.2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರಾಗಿದ್ದು. ನಮೂನೆ–2ನ್ನು ಸಂಬಂದಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಹಾಗೂ ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. • ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂದಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲು ಸ್ಥರಕ್ಕೆ (Creamy Layer) ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). • ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗಿರುತ್ತಾರೆ.
ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು	• ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24.10.2002 ರನ್ವಯ ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು 01 ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).
ಮಾಜಿ ಸೈನಿಕರಿಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು	(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು (ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ (ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು ಅಥವಾ (ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

For more job news visit : www.kpscvaani.com

	(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಅಥವಾ (ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯು ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು • ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು • ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ. • ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು • ಈ ಮೇಲ್ಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ. ವಿವರಣೆ:– ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ. (2) ಸೈನಿಕರು ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. • ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು (ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ)/ ಸೈನಿಕರು ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು ಸೈನಿಕರು ಮಡಿದ/ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ತಪ್ಪಿದಲ್ಲಿ ಇವರ ಈ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ. ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ/ ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರ. • ನಿಯಮಗಳನ್ವಯ ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು, ಇದೇ ನಿರಾಕ್ಷೇಪಣಾ ಪ್ರಮಾಣಪತ್ರದ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.
ಅಂಗವಿಕಲ ಅಭ್ಯರ್ಥಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು	• ಸರ್ಕಾರದ ಅಧಿಸೂಚನೆ ಸಂಖ್ಯೆ : ಸಿಆಸುಇ 149 ಸೆನೆನಿ 2020 ದಿನಾಂಕ 29.08.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ 'ಎ' ಮತ್ತು 'ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ : ಮಮಇ 65 ಪಿಹೆಚ್‌ಪಿ 2010 ದಿನಾಂಕ 18.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು

For more job news visit : www.kpscvaani.com

	ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. • ನಿಗದಿಪಡಿಸಿದ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. • ಸರ್ಕಾರಿ ಅಧಿಸೂಚನೆ ಸಂಖ್ಯೆ ಡಬ್ಲ್ಯೂಸಿಡಿ 434 ಪಿಹೆಚ್‌ಪಿ 2014 ದಿನಾಂಕ 05.06.2015 ರಲ್ಲಿ ನಿಗದಿಪಡಿಸಿದಂತೆ OA, OL, BL & HI ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯು ನೇಮಕಾತಿ ಸಮಿತಿಯು ನಡೆಸುವ ವೈದ್ಯಕೀಯ ಪರೀಕ್ಷೆಯ ವರದಿಗೆ ಬದ್ಧವಾಗಿದೆ. • ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 235 ಸೇನೆನಿ 2012 ದಿನಾಂಕ 22.11.2016ರನ್ವಯ ನಿಗದಿತ ಅಂಗವೈಕಲ್ಯತೆ ಹೊಂದಿದ ಅಭ್ಯರ್ಥಿ ಲಭ್ಯವಾಗದೇ ಭರ್ತಿಯಾಗದ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).
ಅನುಚ್ಛೇದ 371(ಜೆ) ರಂತೆ ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ	• ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ–ಎ ಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸದರಿ ಮೀಸಲಾತಿಯಡಿ ಪರಿಗಣಿಸಲಾಗುವುದಿಲ್ಲ. **ನಿಗದಿಪಡಿಸಿದ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.** • **ಅರ್ಜಿಯಲ್ಲಿ ಹೈದರಾಬಾದ್–ಕರ್ನಾಟಕ ಮೀಸಲಾತಿ ಮತ್ತು ಇನ್ನಿತರ ಯಾವುದೇ ಮೀಸಲಾತಿ ಕೋರದೇ ಇದ್ದಲ್ಲಿ, ನಂತರ ಪರಿಗಣಿಸಲಾಗುವುದಿಲ್ಲ.** • **ಹೈದರಾಬಾದ್–ಕರ್ನಾಟಕ ಮೀಸಲಾತಿ ಅಡಿಯಲ್ಲಿ ಆಯ್ಕೆಯಾಗುವ ಅಭ್ಯರ್ಥಿಗಳು ಹೈದರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿ ಖಾಲಿಯಿರುವ ಹುದ್ದೆಗಳಲ್ಲಿಯೇ ಕಡ್ಡಾಯವಾಗಿ ನೇಮಕಾತಿಯನ್ನು ನೀಡಲಾಗುವುದು ಮತ್ತು ಉಳಿಕೆ ಮೂಲ ವೃಂದದ ಖಾಲಿ ಹುದ್ದೆಗಳಿಗೆ ನೇಮಕಾತಿಯನ್ನು ಮಾಡಲಾಗುವುದಿಲ್ಲ.** (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).
ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಹೈದರಾಬಾದ್–ಕರ್ನಾಟಕ ಮೀಸಲಾತಿ	• ಸರ್ಕಾರಿ ಸೇವೆಯಲ್ಲಿರುವ ನೌಕರರು ದಿನಾಂಕ 29.01.2014 ರಂದು ಹೊರಡಿಸಲಾದ ಅಧಿಸೂಚನೆ–1 ಸಂಖ್ಯೆ ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ–ಎ ನಲ್ಲಿ ಇರುವಂತೆ ತಮ್ಮ ಸೇವಾ ಪುಸ್ತಕದಲ್ಲಿ ದಿನಾಂಕ 01.01.2013 ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಹೈದರಾಬಾದ್–ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ಯಾದಗಿರಿ ಕಂದಾಯ ಜಿಲ್ಲೆಯ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ಕಚೇರಿ ಮುಖ್ಯಸ್ಥರಿಂದ ದಿನಾಂಕ 29.01.2014 ರ ಅಧಿಸೂಚನೆ–1 ರಲ್ಲಿನ ನಿಯಮ 5(2) ರಲ್ಲಿ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರವನ್ನು ಆಧರಿಸಿ ಅಂತಹವರ ಅರ್ಜಿಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗೆದುರಾಗಿ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

For more job news visit : www.kpscvaani.com

	ವಿಶೇಷ ಸೂಚನೆ:– ಸರ್ಕಾರಿ ಸುತ್ತೋಲೆ ಸಂಖ್ಯೆ ಸಿಆಸುಇ 3 ಹೈಕಕೋ 2018 ದಿನಾಂಕ 06.06.2020 ರನ್ವಯ ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳೆರಡಕ್ಕೂ ಅರ್ಜಿ ಸಲ್ಲಿಸಲು ಅರ್ಹರಿದ್ದು, ಎರಡು ವೃಂದದಲ್ಲಿನ ಒಂದೇ ಇಲಾಖೆಯ/ಪದನಾಮದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಂದ ಆಯ್ಕೆ ಆದ್ಯತೆಯನ್ನು ನಮೂದಿಸುವ ಬಗ್ಗೆ ಆನ್–ಲೈನ್ ಅರ್ಜಿಯಲ್ಲಿ ಅವಕಾಶ ನೀಡಲಾಗುವುದು. ಒಂದು ವೇಳೆ ಸ್ಥಳೀಯ ಅಭ್ಯರ್ಥಿಯು ಮಿಕ್ಕುಳಿದ ವೃಂದದ ಹುದ್ದೆಯನ್ನು ಆಯ್ಕೆಮಾಡಿಕೊಂಡು ನೇಮಕಾತಿ ಹೊಂದಿದ್ದಲ್ಲಿ ಅಂತಹ ಅಭ್ಯರ್ಥಿಗೆ ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾವಧಿಯಲ್ಲಿ ಅನುಚ್ಛೇದ 371(ಜೆ) ಮೀಸಲಾತಿ ಸೌಲಭ್ಯವು ದೊರೆಯುವುದಿಲ್ಲ.
ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳು ಸಲ್ಲಿಸಬೇಕಾಗಿರುವ ಪ್ರಮಾಣ ಪತ್ರ	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಥವಾ ವೈದ್ಯಕೀಯ ಶಿಕ್ಷಣ ಇಲಾಖೆ ಅಥವಾ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಅಥವಾ ಕರ್ನಾಟಕದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಯೋಜನೆಗಳಡಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಹಿರಿಯ ವೈದ್ಯಾಧಿಕಾರಿ ಅಥವಾ ತಜ್ಞರು ಅಥವಾ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಅಥವಾ ದಂತ ವೈದ್ಯಾಧಿಕಾರಿಗಳಾಗಿ ಖಾಯಂ ಅಥವಾ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳು ಅಧಿಸೂಚನೆಯಲ್ಲಿ ಸೂಚಿಸಲಾಗಿರುವ ನಮೂನೆಯಲ್ಲಿಯೇ ಕಡ್ಡಾಯವಾಗಿ ಸಂಬಂಧಪಟ್ಟ ನಿಯಂತ್ರಣಾಧಿಕಾರಿಗಳಿಂದ ದೃಢೀಕರಣ ಪತ್ರವನ್ನು ಪಡೆಯತಕ್ಕದ್ದು, ಅಧಿಸೂಚನೆಯಲ್ಲಿ ಸೂಚಿಸಿರುವ ನಮೂನೆಯನ್ನು ಹೊರತುಪಡಿಸಿ ಇತರೆ ನಮೂನೆಗಳಲ್ಲಿ ಪಡೆದಿರುವ ಪ್ರಮಾಣಪತ್ರಗಳನ್ನು ತಿರಸ್ಕರಿಸಲಾಗುವುದು.
• ಈ ಮೇಲ್ಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ, ಆ ಮೀಸಲಾತಿಯನ್ನು ರದ್ದುಪಡಿಸಿ, ನಿಯಮಗಳನ್ವಯ ಸಾಮಾನ್ಯ ಅರ್ಹತೆಯನ್ನು ಹೊಂದಿದಲ್ಲಿ ಮಾತ್ರ, ಸಾಮಾನ್ಯ ಅರ್ಹತೆಯಡಿ ಪರಿಗಣಿಸಲಾಗುವುದು.	

ಸೇವಾನಿರತ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು:–

ಸೇವಾ ನಿರತ ಅಭ್ಯರ್ಥಿಗಳು	• ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 5(4) ರನ್ವಯ "ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇತರೆ ಇಲಾಖೆಯಲ್ಲಿ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ ಇತರ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆಯೇ ಅರ್ಜಿಯನ್ನು ಸಲ್ಲಿಸಿದ್ದರೆ ಅಂತಹ ಅಭ್ಯರ್ಥಿಗಳು ಸರ್ಕಾರದ ಯಾವುದೇ ಇಲಾಖೆಯಲ್ಲಿನ ಹುದ್ದೆಯ ನೇಮಕಕ್ಕೆ ಅರ್ಹರಾಗಿರುವುದಿಲ್ಲ. • ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅನುಮತಿಯನ್ನು ಅಂದರೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. • ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಈ ನಿರಾಕ್ಷೇಪಣಾ ಪ್ರಮಾಣ ಪತ್ರದ (NOC) ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ನಿರಾಕ್ಷೇಪಣಾ ಪ್ರಮಾಣ ಪತ್ರ (NOC)ವನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

For more job news visit : www.kpscvaani.com

ಪ್ರಮುಖ ಸೂಚನೆಗಳು:–

- ವಿಶೇಷ ನೇಮಕಾತಿ ಸಮಿತಿಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ.
- ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನಮೂದಿಸಲಾದ ಮೀಸಲಾತಿ, ವಿದ್ಯಾರ್ಹತೆ, ಹಾಗೂ ಇತರೆ ವಿವರಗಳ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಕೋರಿಕೆಗಳನ್ನು ತಿರಸ್ಕರಿಸಲಾಗುವುದು. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು.
- ಅಪೂರ್ಣವಾಗಿರುವ, ಭಾವಚಿತ್ರ ಮತ್ತು ಸಹಿಯನ್ನು ಅಪ್ಲೋಡ್ ಮಾಡದೇ ಇರುವ ಹಾಗೂ ನಿಗದಿತ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. ಯಾವುದೇ ಕಾರಣಕ್ಕೂ ನೇಮಕಾತಿ ಸಮಿತಿಯಿಂದ ಅರ್ಜಿಯ ನಕಲು ಪ್ರತಿ ಪಡೆಯಲು ಅವಕಾಶ ಇರುವುದಿಲ್ಲ.
- ತಜ್ಞ ವೈದ್ಯರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸ್ನಾತಕೋತ್ತರ / ಡಿಪ್ಲೊಮಾ ವ್ಯಾಸಂಗದ ಅಂಕಗಳನ್ನು ಅನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸುವುದು ಹಾಗೂ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಮೂಲ ಅಂಕಪಟ್ಟಿಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಪರಿಶೀಲಿಸಿ ಮೇಲ್ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳನ್ನು ಮಾತ್ರ ಮೂಲ ದಾಖಲಾತಿ ಪರಿಶೀಲನೆಗೆ ಆಹ್ವಾನಿಸಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
- ಅರ್ಜಿ ಸಲ್ಲಿಸುವ ಮುನ್ನ ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ಧೃಢೀಕರಣ ನೀಡುವಾಗ ಎಚ್ಚರ ವಹಿಸಬೇಕು.
- ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾದಲ್ಲಿ ತಮ್ಮ ಅರ್ಜಿಯಲ್ಲಿ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಗಳನ್ನು ತಿರಸ್ಕರಿಸಲಾಗುವುದು. ಆದುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ನಿಗದಿತ ನಮೂನೆಯಲ್ಲಿ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು (ಮೀಸಲಾತಿ ಕೋರಿರುವ) ಪಡೆದಿಟ್ಟುಕೊಂಡಿದ್ದು, ಮೂಲ ಪ್ರತಿಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಮೂಲದಾಖಲಾತಿಗಳ ಪರಿಶೀಲನೆಗೆ:– ಅಧಿಸೂಚಿಸಿರುವ ಹುದ್ದೆಗಳಿಗೆ ಮೂಲ ದಾಖಲೆಗಳ ಪರಿಶೀಲನೆಯ ದಿನಾಂಕ ನಿಗದಿಪಡಿಸಿದಾಗ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ಅರ್ಜಿಯಲ್ಲಿ ನಮೂದಿಸಿರುವ ಮೊಬೈಲ್ ಸಂಖ್ಯೆ ಮತ್ತು ಇ–ಮೇಲ್ ಮುಖಾಂತರ ಸಂದೇಶವನ್ನು ರವಾನಿಸಲಾಗುವುದು ಹಾಗೂ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಸ್ವಂತ ವೆಚ್ಚದಲ್ಲಿ ಹಾಜರಾಗತಕ್ಕದ್ದು.

ದುರ್ನಡತೆ:–

